ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಕೆರೆಗಳ ಅಭಿವೃದ್ಧಿ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-

1234 (1557) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿರುವ ಸಣ್ಣ ನೀರಾವರಿ ಇಲಾಖೆಗೆ ಸೇರಿದ ಕೆರೆಗಳ ಸಂಖ್ಯೆ ಎಷ್ಟು ; ಇವುಗಳು ಯಾವ ಯಾವ ಗ್ರಾಮಗಳಲ್ಲಿವೆ; ಹಾಗೂ ಇವುಗಳ ನೀರಾವರಿ ಸಾಮರ್ಥ್ಯ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಜಿಲ್ಲೆಯ ಜನ ಮತ್ತು ರೈತರ ಸಂಖ್ಯೆಗೆ ಅನುಗುಣವಾಗಿ ಇನ್ನು ಎಷ್ಟು ಕೆರೆಗಳ ಅವಶ್ಯಕತೆ ಇದೇ ; (ಮಾಹಿತಿ ಒದಗಿಸುವುದು)

(ಇ) ಜಿಲ್ಲೆಯಲ್ಲಿ ಹೊಸದಾಗಿ ಸಣ್ಣ ಕೆರೆಗಳನ್ನು ನಿರ್ಮಿಸಲು ಯಾವಾಗ ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದೆ ; ಪ್ರಸಕ್ತ ಸಾಲಿನನ್ವಯ ಜಿಲ್ಲೆಯ ಯಾವ ಯಾವ ಗ್ರಾಮಗಳಲ್ಲಿ ಸಣ್ಣ ಕೆರೆಗಳನ್ನು ನಿರ್ಮಿಸಲಾಗುವುದು; ಇದಕ್ಕೆ ಅಗತ್ಯ ಇರುವ ಹಣ ಎಷ್ಟು ;

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಜಿಲ್ಲೆಯ ಸಣ್ಣ ಕೆರೆಗಳ ಸಂರಕ್ಷಣೆ ನಿರ್ವಹಣೆ ಮತ್ತು ಜೀರ್ಣೋದ್ಧಾರಕ್ಕೆ ಸರ್ಕಾರ ಪ್ರತಿ ವರ್ಷ ವೆಚ್ಚ ಮಾಡಿದ ಹಾಗೂ ಇದೇ ಅವಧಿಯಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ಹಣವೆಷ್ಟು ;

(ಉ) ಹಾಗಿದ್ದಲ್ಲಿ, ಕೇಂದ್ರ ಹಾಗೂ ರಾಜ್ಯ ಸರ್ಕಾರವು ನೀಡಿರುವ ಅನುದಾನದಲ್ಲಿ ಜಿಲ್ಲೆಯಲ್ಲಿ ವಿವಿಧ ಕೆರೆಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು ? (ಕೆರೆಗಳ ಊರು ಅಂಕಿ ಅಂಶಗಳನ್ನು ಒದಗಿಸುವುದು)